# ಕರ್ನಾಟಕ ಸರ್ಕಾರ

ಸಂ.ವಇ/86/ಹೆಚ್ಎಎಂ/2009(p4)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ 9ನೇ ಫೆಬ್ರವರಿ 2011.

C-16481

ಇಂದ:

ಸರ್ಕಾರದ ಕಾರ್ಯದರ್ಶಿಗಳು,
ವಸತಿ ಇಲಾಖೆ, ವಿಕಾಸ ಸೌಧ,
ಬೆಂಗಳೂರು.

ಇವರಿಗೆ:

ವ್ಯವಸ್ಥಾಪಕ ನಿರ್ದೇಶಕರು,
ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿ.,
ಬಂಡೆಮಠ, ಕೆಂಗೇರಿ ಉಪನಗರ,
ಬೆಂಗಳೂರು.

ಮಾನ್ಯರೆ,

ವಿಷಯ: ಬಸವ-ಇಂದಿರಾ ವಸತಿ ಯೋಜನೆಯಡಿ ಹೆಚ್ಚುವರಿ ಗುರಿ ನಿಗದಿಪಡಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಸುತ್ತೋಲೆ ಸಂಖ್ಯೆ : ವಇ 86 ಹೆಚ್ಎಎಂ 2009, ದಿನಾಂಕ 07-07-2010.

2)ಸರ್ಕಾರದ ಪತ್ರ ಸಂಖ್ಯೆ: ವಇ 86 ಹೆಚ್ಎಎಂ 2009, ದಿನಾಂಕ 24-09-2010.

---

ದಿನಾಂಕ 07-07-2010ರ ಉಲ್ಲೇಖಿತ ಸುತ್ತೋಲೆಯಲ್ಲಿ ಬಸವ-ಇಂದಿರಾ ವಸತಿ ಯೋಜನೆಯಡಿ ಪ್ರತಿ ವಿಧಾನ ಸಭಾ ಕ್ಷೇತ್ರದಲ್ಲಿ ನಿರ್ಮಿಸಬಹುದಾದ ಮನೆಗಳ ಸಂಖ್ಯೆಯು 1000ಕ್ಕಿಂತ ಹೆಚ್ಚಾಗಿದ್ದ ಪಕ್ಷದಲ್ಲಿ 1000 ಹೆಚ್ಚಿನ ಮನೆಗಳ ನಿರ್ಮಾಣವನ್ನು ಅಂತ್ಯದಲ್ಲಿ ಕೈಗೊಳ್ಳಲು ಆದೇಶಿಸಲಾಗಿದೆ. ದಿನಾಂಕ 24-9-2010ರ ಸರ್ಕಾರದ ಪತ್ರದಲ್ಲಿ ಇನ್ನು ಹೆಚ್ಚಿನ ಸಂಖ್ಯೆಯ ಅರ್ಹ ಫಲಾನುಭವಿಗಳು ಕಂಡುಬಂದಲ್ಲಿ ಆಯಾ ವಿಧಾನ ಸಭಾ ಕ್ಷೇತ್ರದಲ್ಲಿ ಹೆಚ್ಚುವರಿಯಾಗಿ 1000 ಮನೆಗಳ ನಿರ್ಮಾಣಕ್ಕಾಗಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪ್ರಾರಂಭಿಸುವಂತೆ ಸೂಚಿಸಲಾಗಿದೆ.

ಚುನಾಯಿತ ಪ್ರತಿನಿಧಿಗಳಿಂದ ಆಯಾ ತಾಲ್ಲೂಕಿಗೆ ಇನ್ನು ಹೆಚ್ಚುವರಿ ಮನೆಗಳನ್ನು ಮಂಜೂರು ಮಾಡುವಂತೆ ಸರ್ಕಾರಕ್ಕೆ ಬೇಡಿಕೆ ಬರುತ್ತಿರುವುದರಿಂದ ಆಯಾ ವಿಧಾನ ಸಭಾ ಕ್ಷೇತ್ರದಲ್ಲಿ ಅರ್ಹ ಫಲಾನುಭವಿಗಳ ಲಭ್ಯತೆಗನುಗುಣವಾಗಿ ಇನ್ನೂ ಹೆಚ್ಚುವರಿ ಮನೆಗಳನ್ನು ನಿರ್ಮಿಸಲು ಸರ್ಕಾರದ ಅನುಮತಿ ನೀಡಲಾಗಿದ್ದು, ಇಂತಹ ಹೆಚ್ಚುವರಿ ಮನೆಗಳ ಸಂಖ್ಯೆ 2000ಕ್ಕೆ ಸೀಮಿತಗೊಳಿಸತಕ್ಕದ್ದು.

ಈ ಮನೆಗಳ ಹಂಚಿಕೆಗಾಗಿ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಪಾರದರ್ಶಕತೆಯನ್ನು ಕಾಪಾಡಿಕೊಂಡು ಅರ್ಹ ಮತ್ತು ನಿಜವಾದ ಫಲಾನುಭವಿಗಳಿಗೆ ಮನೆಗಳು ತಲುಪಿಸುವ ಜವಾಬ್ದಾರಿಯನ್ನು ನಿರ್ವಹಿಸುವಲ್ಲಿ ಆಯಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕಿನ ಕಾರ್ಯ ನಿರ್ವಾಹಕಾಧಿಕಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ

ಪಂಚಾಯತ್ ಕಾರ್ಯದರ್ಶಿಗಳ ಪಾತ್ರ ಪ್ರಮುಖವಾದುದು. ಅರ್ಹ ಫಲಾನುಭವಿಗಳಲ್ಲದೆ ಇತರರನ್ನು ಆಯ್ಕೆ ಮಾಡಿದ್ದೆ ಆದರೆ ಸಂಬಂಧಪಟ್ಟ ಅಧಿಕಾರಿಗಳು ಕಾನೂನಿನ ದೃಷ್ಟಿಯಿಂದಲೂ ತಪ್ಪಿತಸ್ಥರಾಗುತ್ತಾರೆ. ಎಲ್ಲಾ ಸಂಬಂಧಪಟ್ಟ ಅಧಿಕಾರಿಗಳು ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಕಟ್ಟುನಿಟ್ಟಾಗಿ ಪಾರದರ್ಶಕತೆಯನ್ನು ಪಾಲಿಸುವಂತೆ ಸೂಕ್ತ ಸೂಚನೆಯನ್ನು ನೀಡುವಂತೆಯೂ ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Vallur 9/2

(ಕೆ. ಆರ್. ವಲ್ಲೂರ)
ಪೀಠಾಧಿಕಾರಿ -2, ವಸತಿ ಇಲಾಖೆ.